# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,

## ಸಹಾಯಕ ಕಾರ್ಯಪಾಲಕ ಅಭಿಯಂತರರು, ಯಲಹಂಕ ಉಪ ವಿಭಾಗ

## ಕೆಂಪೇಗೌಡ ವಾರ್ಡ್ ನಂ-01ರಲ್ಲಿ

## ದಿನಾಂಕ: 03-12-2022 ರಂದು ನಡೆದ ವಾರ್ಡ್ ಸಮಿತಿ ಸಭಾ ನಡವಳಿ.

ದಿನಾಂಕ: 03-12-2022 ರಂದು ಬೆಳಗ್ಗೆ 11.00 ಗಂಟೆಗೆ ಬಿ.ಬಿ.ಎಂ.ಪಿ ಯಲಹಂಕ ವಿಭಾಗದ ಕಛೇರಿಯಲ್ಲಿ ವಾರ್ಡ್ ನಂ-01ರ ವಾರ್ಡ್ ಸಮಿತಿಯ ಮಾನ್ಯ ನೋಡೆಲ್ ಅಧಿಕಾರಿಗಳು ಹಾಗೂ ಕಾರ್ಯದರ್ಶಿಗಳು ಜೊತೆ ನೆಡೆದ ವಾರ್ಡ್ ಕಮಟಿ ಸಭೆಯ ನಡವಳಿಗಳು.

| ಕ್ರ.ಸಂ | ಸಭೆಯಲ್ಲಿ ಭಾಗವಹಿಸಿದ ಅಧಿಕಾರಿ ಹೆಸರು | ಪದನಾಮ |
|---|---|---|
| 01 | ಶ್ರೀ.ರಾಮಸಂಜೀವಯ್ಯ | ಸಹಾಯಕ ಕಾರ್ಯಪಾಲಕ ಅಭಿಯಂತರರು ಯಲಹಂಕ ಉಪ ವಿಭಾಗ ಹಾಗೂ ಬಿ.ಬಿ.ಎಂ.ಪಿ ನೋಡಲ್ ಅಧಿಕಾರಿಗಳು (ವಾರ್ಡ್ ನಂ-01) |
| 02 | ಶ್ರೀ.ದೇವರಾಜಯ್ಯ.ಕೆ.ಬಿ. | ಸಹಾಯಕ ಅಭಿಯಂತರರು (ವಾರ್ಡ್ ನಂ-01) |
| 03 | ಶ್ರೀ.ಕೆ.ಎನ್. ಬಾಬುರೆಡ್ಡಿ | ಸಹಾಯಕ ಅಭಿಯಂತರರು (ವಿದ್ಯುತ್) |
| 04 | ಶ್ರೀ.ಅಶೋಕ್ .ಎಂ.ಆರ್ | ಸಹಾಯಕ ಕಂದಾಯ ಅಧಿಕಾರಿಗಳು ಯಲಹಂಕ ಉಪ ವಿಭಾಗ ಗೈರು ಹಾಜರಾಗಿರುತ್ತಾರೆ. |
| 05 | ಶ್ರೀ.ಶಿವಕುಮಾರ್.ಎ.ವಿ | ರೆವಿನ್ಯೂ ಇನ್ಸ್‌ಪೇಕ್ಟರ್ ಗೈರು ಹಾಜರಾಗಿರುತ್ತಾರೆ. |
| 06 | ಶ್ರೀಮತಿ. ಸುನಂದಮ್ಮ | ಹಿರಿಯ ಆರೋಗ್ಯ ಪರಿವೀಕ್ಷಕರು |
| 07 | ಶ್ರೀ. ವಿನಯ ಕುಮಾರ್ | ಸಹಾಯಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) |
| 08 | ಶ್ರೀ. ಎನ್. ಶ್ರೀರಾಮ ರೆಡ್ಡಿ | ರೆವಿನ್ಯೂ ಇನ್ಸ್‌ಪೇಕ್ಟರ್ ಗೈರು ಹಾಜರಾಗಿರುತ್ತಾರೆ. |
| 09 | ಶ್ರೀ.ವಿವೇಕ್ | ಕಿರಿಯ ಆರೋಗ್ಯಪರಿವೀಕ್ಷಕರು ವಾಡ್-1 |
| 10 | ಶ್ರೀ.ಕುಮಾರ್ ಸ್ವಾಮಿ | ಜಾನುವಾರ ಅಧಿಕಾರಿಗಳು |
| 11 | ಶ್ರೀ.ನವೀನ್ ಕುಮಾರ್ ವಿ | ಸಹಾಯಕ ಅಭಿಯಂತರರು (ವಿದ್ಯುತ್) ಬಿ.ಬಿ.ಎಂ.ಪಿ |
| | ಬಡಾವಣೆ ಕ್ಷೇಮಾಭಿವೃದಿ ಸಂಘದ ಅಧ್ಯಕ್ಷರು/ಕಾರ್ಯದರ್ಶಿ/ಸದಸ್ಯರು/ಸಾರ್ವಜನಿಕರು | |
| 01 | ಶ್ರೀ.ಹೇಮರಾಜ್ | ಸ್ಥಳೀಯ ಮುಖಂಡರು. |
| 02 | ಶ್ರೀ. ಅ.ಬ.ಶಿವಕುಮಾರ್ | ಸ್ಥಳೀಯ ಮುಖಂಡರು |
| 03 | ಶ್ರೀ.ರಾಮರೆಡ್ಡಿ | ಸ್ಥಳೀಯ ನಿವಾಸಿಗಳು |



CamScanner

| | | |
|---|---|---|
| 04 | ಶ್ರೀ.ಓ.ಎನ್.ರಾಜು | ಸ್ಥಳೀಯ ನಿವಾಸಿಗಳು, |
| 05 | ಶ್ರೀ.ಶ್ರೀನಿವಾಸಲು | ಸ್ಥಳೀಯ ನಿವಾಸಿಗಳು, |
| 06 | ಶ್ರೀ.ಶೌಕತ್ ಅಲಿ | ಪತ್ರಿಕಾ ವರದಿಗಾರ |
| 07 | ಶ್ರೀ.ಜಯಪ್ಪ | ಯಲಹಂಕ |
| 08 | ಶ್ರೀ.ಓ.ಎನ್.ರಮೇಶ್ (ರಾಜ್ಯಾಧ್ಯಕ್ಷ) | ಎಲೆಕ್ಟ್ರಿಕಲ್ಸ್ ಗುತ್ತಿಗೆದಾರರು |
| 09 | ಶ್ರೀ.ಸುರೇಶ್ | ವಾಹನ ಚಾಲಕ |

ಸಭೆಗೆ ಹಾಜರಿದ್ದ ಸಂಚಾರ ಅಧಿಕಾರಿಗಳು ಹಾಗೂ ಸಾರ್ವಜನಿಕರು ಎಲ್ಲಾ ಅಧಿಕಾರಿಗಳನ್ನು ಮತ್ತು ಸಾರ್ವಜನಿಕರನ್ನು ಸಭೆಗೆ ಸ್ವಾಗತಿಸುತ್ತಾ, ಸಭೆ ಪ್ರಾರಂಭಿಸಲು ಸಂಚಾರ ಅಧಿಕಾರಿಯವರನ್ನು ಕೋರಲಾಯಿತು.

ಶ್ರೀ.ರಾಮಾಂಜನೇಯ, ಸಹಾಯಕ ಕಾರ್ಯಪಾಲಕ ಅಭಿಯಂತರರು ಯಲಹಂಕ ಉಪ ವಿಭಾಗ ಹಾಗೂ ಸಮಿತಿಯ ಸಂಚಾರ ಅಧಿಕಾರಿಯವರು ಸಭೆಯನ್ನು ಪ್ರಾರಂಭಿಸಿ ಈ ಹಿಂದಿನ ಸಭೆಯಲ್ಲಿ ಅಂದರೆ ದಿನಾಂಕ 23-11-2022 ರಂದು ನಡೆದ ಸಭೆಯಲ್ಲಿ ಕೈಗೊಂಡ ಕ್ರಮಗಳ ಬಗ್ಗೆ ವಿವರಣೆ ನೀಡಿದರು. ಹಾಗೂ ವಾರ್ಡ್ ನಂ-01ರ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಅಧಿಕಾರಿಗಳಿಗೆ ಕೈಗೊಂಡ ಕ್ರಮದ ಬಗ್ಗೆ ವರದಿ ನೀಡುವಂತೆ ಸಭೆಯಲ್ಲಿ ಸೂಚಿಸಿದರು. ಹಾಗೂ ಈ ಹಿಂದೆ ಕೈಗೊಂಡಿರುವ ಸಭೆಯ ನಡವಳಿಗಳನ್ನು ಸಭೆಯಲ್ಲಿ ಓದಿಹೇಳಲಾಯಿತು.

| ಕ್ರ.ಸಂ | ವಿಷಯ ಸೂಚಿ | ನಿರ್ಣಯ | ಕ್ರಮ ಕೈಗೊಳ್ಳಬೇಕಾದ ಅಧಿಕಾರಿ |
|---|---|---|---|
| 01 | ಯಲಹಂಕ ಕೆಂಪೇಗೌಡ ವಾರ್ಡ್ ನಂ-01ರ ವ್ಯಾಪ್ತಿಯಲ್ಲಿರುವ ಬಿ.ಬಿ.ಎಂ.ಪಿ ಕಛೇರಿಯ ಹಿಂಭಾಗದಲ್ಲಿರುವ ರಸ್ತೆಯಲ್ಲಿ ನೀರಿನ ಸೋರಿಕೆ ಇರುವುದರಿಂದ ಸಾರ್ವಜನಿಕರಿಗೆ ರಸ್ತೆಯ ಉಪಯೋಗಿಸಲು ತೊಂದರೆಯಾಗಿರುತ್ತದೆ. ಆದ್ದರಿಂದ ಈ ರಸ್ತೆಯಲ್ಲಿ ನೀರಿನ ಸೋರಿಕೆ ತಪ್ಪಿಸಿದರೆ, ಸಂಬಂಧಪಟ್ಟ ಬಿ.ಬಿ.ಎಂ.ಪಿ ಅಧಿಕಾರಿಗಳು ನಿರ್ವಹಣೆ ಮಾಡುತ್ತಾರೆಂದು ಎ.ಬಿ.ನಾಗರಾಜ್ ರವರು ಸಭೆಯಲ್ಲಿ ಮನವಿ ನೀಡಿದರು. | ಇದಕ್ಕೆ ಸಂಬಂಧಿಸಿದಂತೆ ಸಂಚಾರ ಅಧಿಕಾರಿಗಳು ಸಂಬಂಧಿತ ಜಲಮಂಡಳಿಯ ಜೊತೆ ಚರ್ಚಿಸಿ, ಕ್ರಮ ಕೈಗೊಳ್ಳಲಾಗುವುದು ಎಂದು ಸಭೆಯಲ್ಲಿ ತಿಳಿಸಿದರು. | ಸಹಾಯಕ ಅಭಿಯಂತರರು ವಾರ್ಡ್ 1 |
| 02 | ಕೆಂಪೇಗೌಡ ವಾರ್ಡ್ ನಂ-01ರ ವ್ಯಾಪ್ತಿಯಲ್ಲಿರುವ ಕೋಗಿಲು ಕ್ರಾಸ್ ಬಳಿ ಬ್ರಿಡ್ಜ್ ಕೆಳಭಾಗದಲ್ಲಿ ವಾಹನಗಳು ನಿಲ್ಲಿಸುತ್ತಿರುವುದರಿಂದ ವಾಹನ ಸಂಚಾರಕ್ಕೆ ತೊಂದರೆ ಉಂಟಾಗುತ್ತಿರುವುದಾಗಿ ಸಭೆಯಲ್ಲಿ ಟ್ರಾಫಿಕ್ ಪಿ.ಎಸ್.ಐ ರವರು ತಿಳಿಸಿದರು. | ಇದಕ್ಕೆ ಸಂಬಂಧಿಸಿದಂತೆ ಸಂಚಾರ ಅಧಿಕಾರಿಗಳು ವಾಹನ ನಿಲುಗಡೆ ನಿಷೇಧಿತ ಫಲಕ ಬಳಿ ಅಳವಡಿಸಲಾಗುವುದು ಎಂದು ಸಭೆಯಲ್ಲಿ ತಿಳಿಸಿದರು. | ಸಹಾಯಕ ಅಭಿಯಂತರರು ವಾರ್ಡ್ 1 |

| | | | |
|---|---|---|---|
| 03 | ಕೆಂಪೇಗೌಡ ವಾರ್ಡ್ ನಂ-01ರ ವ್ಯಾಪ್ತಿಯಲ್ಲಿರುವ ಡೌನ್ ಬಜಾರ್ ರಸ್ತೆಯ ಬಳಿ ಭಾನುವಾರದ ಸಂತೆಯನ್ನು ಮುಚ್ಚುವಂತೆ ಹಲವಾರು ಭಾರಿ ಹೇಳಿದರು ಸಹ ಭಾನುವಾರದಂದು ಕೆಲವು ವ್ಯಾಪಾರಿಗಳು ಸಂತೆಜಾಗದಲ್ಲಿ ತರಕಾರಿಗಳನ್ನು ಮಾರುತ್ತಿರುವುದರಿಂದ ತೊಂದರೆ ಉಂಟಾಗುತ್ತಿರುವುದರಿಂದ ಈ ಜಾಗದಲ್ಲಿ ಮಾರ್ಷಲ್‌ಗಳನ್ನು ನಿಯೋಜಿಸಿ ಕ್ರಮ ಕೈಗೊಳ್ಳಬೇಕೆಂದು ಸಭೆಯಲ್ಲಿ ಅ.ಬ.ಶಿವಕುಮಾರ್ ರವರು ತಿಳಿಸಿದರು | ಇದಕ್ಕೆ ಸಂಬಂದಿಸಿದಂತೆ ನೊಡೆಲ್ ಅಧಿಕಾರಿಗಳು ಮಾತನಾಡಿ ಆರೋಗ್ಯ ವೈದ್ಯಾಧಿಕಾರಿಗಳ ಜೊತೆ ಮಾತನಾಡಿ ಮಾರ್ಷಲ್ ಗಳನ್ನು ನಿಯೋಜಿಸಲು ಕ್ರಮ ವಹಿಸಲಾಗುವುದೆಂದು ಸಭೆಯಲ್ಲಿ ತಿಳಿಸಿದರು. | ಆರೋಗ್ಯ ವೈದ್ಯಾಧಿಕಾರಿಗಳು ಯಲಹಂಕ ವಲಯ |
| 04 | ಯಲಹಂಕ ಸರ್ಕಾರಿ ಆಸ್ಪತ್ರೆಯ ಎರಡೂ ಬದಿಯಲ್ಲಿ ಪಾತ್ರೆ ವ್ಯಾಪಾರ ಮಾಡುವ ವ್ಯಾಪಾರಿಗಳು ಪಾತ್ರೆಗಳನ್ನು ಪಾದಚಾರಿ ಮಾರ್ಗಗಳಲ್ಲಿ ಇಟ್ಟಿರುವುದಾಗಿ ಇದರಿಂದ ಸಾರ್ವಜನಿಕರ ಒಡಾಟಕ್ಕೆ ತೊಂದರೆ ಉಂಟಾಗಿರುವುದಾಗಿ ಸಭೆಯಲ್ಲಿ ಸಾರ್ವಜನಿಕರು ದೂರನ್ನು ಸಲ್ಲಿಸಿದರು | ಇದಕ್ಕೆ ಸಂಬಂದಿಸಿದಂತೆ ಪಾದಚಾರಿ ಮಾರ್ಗಗಳಲ್ಲಿ ಇಟ್ಟಿರುವ ಪಾತ್ರೆಗಳನ್ನು ತೆಗೆಯುವಂತೆ ಹಾಗೂ ತೆರವುಗೊಳಿಸುವಂತೆ ಸಂಬಂಧಿಸಿದ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ತಿಳಿಸಿದರು. | ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ-01. & ಸ-ಅ. ವಾರ್ಡ್-01. |

ಈ ಮೇಲ್ಕಂಡ ಎಲ್ಲಾ ಅಂಶಗಳನ್ನು ಕೂಲಂಕುಷವಾಗಿ ಚರ್ಚಿಸಲಾಯಿತು, ಹಾಗೂ ಸಭೆಯಲ್ಲಿ ಹಾಜರಿದ್ದ ಎಲ್ಲಾ ಸದಸ್ಯರಿಗೆ ಹಾಗೂ ಅಧಿಕಾರಿಗಳಿಗೆ ವಂದನೆಗಳನ್ನು ಸಲ್ಲಿಸಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಶ್ರೀ.ಕೆ.ಬಿ.ದೇವರಾಜಯ್ಯ
ಸಹಾಯಕ ಅಭಿಯಂತರರು

ಶ್ರೀ.ರಾಮಸಂಜೀವಯ್ಯ
ಸಹಾಯಕ ಕಾರ್ಯಪಾಲಕ ಅಭಿಯಂತರರು ಹಾಗೂ
ನೋಡೆಲ್ ಅಧಿಕಾರಿಗಳು ವಾರ್ಡ್ ನಂ-01

ಪ್ರತಿಯನ್ನು:

1. ಮಾನ್ಯ ಜಂಟಿ ಆಯುಕ್ತರು ಯಲಹಂಕ ವಲಯರವರ ಆಪ್ತ ಶಾಖೆಗೆ ಕಳುಹಿಸಿದೆ.
2. ಮಾನ್ಯ ಮುಖ್ಯ ಅಭಿಯಂತರರು ಯಲಹಂಕ ವಲಯರವರ ಆಪ್ತ ಶಾಖೆಗೆ ಕಳುಹಿಸಿದೆ.
3. ಆರೋಗ್ಯ ವೈದ್ಯಾಧಿಕಾರಿಗಳು ಯಲಹಂಕ ವಲಯರವರಿಗೆ ಕಳುಹಿಸಿದೆ.
4. ಕಾರ್ಯಪಾಲಕ ಅಭಿಯಂತರರು, ಬಿ.ಬಿ.ಎಂ.ಪಿ ಯಲಹಂಕ ವಿಭಾಗ/ವಿದ್ಯುತ್/ರಸ್ತೆ ಮತ್ತು ಮೂಲಭೂತ ಸೌಕಾರ್ಯ/ಯೋಜನೆ/ಕೆರೆಗಳು/ ಯಲಹಂಕ ವಲಯ ಸೂಕ್ತ ಕ್ರಮಕ್ಕಾಗಿ.
5. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ/ ವಿದ್ಯುತ್/ ಬೇಸ್ಕಾಂ/ ಬಿಡಬ್ಲ್ಯೂ.ಎಸ್.ಎಸ್.ಬಿ/ಬೊರೆವೆಲ್ ಡಿವಿಷನ್/ ಯೋಜನೆ/ಯಲಹಂಕ ವಲಯರವರ ಸೂಕ್ತ ಕ್ರಮಕ್ಕಾಗಿ.
6. ಸಹಾಯಕ ಕಂದಾಯ ಅಧಿಕಾರಿಗಳು ಯಲಹಂಕ ಉಪ ವಿಭಾಗ/ಜಾಹಿರಾತು ಬಿ.ಬಿ.ಎಂ.ಪಿ ರವರ ಸೂಕ್ತ ಕ್ರಮಕ್ಕಾಗಿ.
7. ಆರಕ್ಷಕ ನೀರಿಕ್ಷಕರು ಯಲಹಂಕ ಪೊಲೀಸ್ ಠಾಣೆ ಸಂಚಾರಿ/ ಕಾನೂನು ಸುವ್ಯವಸ್ಥೆ/ ಯಲಹಂಕ ಬೆಂಗಳೂರು ರವರ ಸೂಕ್ತ ಕ್ರಮಕ್ಕಾಗಿ.
8. ಜಾನುವಾರಿ ಅಧಿಕಾರಿಗಳು ಪಶುಪಾಲನೆ ವಿಭಾಗ ಯಲಹಂಕ ವಲಯ ರವರ ಸೂಕ್ತ ಕ್ರಮಕ್ಕಾಗಿ.
9. ಅಧೀಕ್ಷಕರು ತೋಟಗಾರಿಕೆ ಇಲಾಖೆ ಬಿ.ಬಿ.ಎಂ.ಪಿ ಯಲಹಂಕ ವಲಯರವರ ಸೂಕ್ತ ಕ್ರಮಕ್ಕಾಗಿ.
10. ಡಿಪೋ ಮ್ಯಾನೇಜರ್ ಡಿಪೊ-13 ಪುಟ್ಟೇನಹಳ್ಳಿ ಡಿಪೋ ಯಲಹಂಕ ಬೆಂಗಳೂರು ಸೂಕ್ತ ಕ್ರಮಕ್ಕಾಗಿ.
11. ಕಛೇರಿ ಕಡತಕ್ಕೆ.